OS No. 27/2020 PW-**1**

**ದಿನಾಂಕ 11.12.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಿನಾಂಕ 25.11.2015 ರ ಶುದ್ಧ ಕ್ರಯದ ಕರಾರು ಪತ್ರಕ್ಕೆ ಸಂಬಂದಪಟ್ಟಂತೆ ಸ್ಟಾಂಪ್ ಡ್ಯೂಟಿ ಆ್ಯಂಡ್ ಪೆನಾಲ್ಟಿ ಯನ್ನು ಪಾವತಿ ಮಾಡಿದ್ದರಿಂದ ಅದನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಎ) ಎಂದು, ಪ್ರತಿವಾದಿಗಳು ನನ್ನ ಸಮಕ್ಷಮ ನಿಪಿ-1 ರ ದಾಖಲೆಗೆ ಸಹಿಗಳನ್ನು ಮಾಡಿರುತ್ತಾರೆ. ಸದರಿ ದಾಖಲೆಗೆ ಸುಮಂತ್ ಮತ್ತು ಲೋಕೇಶ್ ಸಹಿ ಹಾಕಿರುತ್ತಾರೆ. ಸಾಕ್ಷಿಯು ಸದರಿ ಅವರ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ನಿಪಿ-1(ಬಿ) ಮತ್ತು ನಿಪಿ-1(ಸಿ) ಎಂದು ಗುರುತಿಸಲಾಯಿತು. ದಿಃ12.04.2019 ರಂದು ಬರೆದುಕೊಟ್ಟ ಷರಾವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಎ) ಎಂದು, ಸದರಿ ಷರಾ ಗೆ ಈ ಮೇಲೆ ಹೇಳಿದ ಸುಮಂತ್ ಮತ್ತು ಲೋಕೇಶ್ ರವರು ಸಾಕ್ಷಿದಾರರಾಗಿ ಸಹಿ ಹಾಕಿರುತ್ತಾರೆ. ಸಾಕ್ಷಿಯು ಸದರಿ ಅವರ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ನಿಪಿ-2(ಬಿ) ಮತ್ತು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-2 ರ ದಾಖಲೆಗೆ ಸಿದ್ದಯ್ಯ, ವಿನುತಾ, ನಾಗರಾಜು, ಸೋಮಶೇಖರ್, ಸುಜಾತ, ಸತೀಶ್, ಜಯಮ್ಮ ಮತ್ತು ರಾಜಶೇಖರ್ ರವರುಗಳು ಸಹಿ ಮತ್ತು ಹೆಬ್ಬೆಟ್ಟಿನ ಗುರುತುಗಳನ್ನು ಹಾಕಿರುತ್ತಾರೆ. ದಾವಾ ಸ್ವತ್ತಿಗೆ ಸಂಬಂದಪಟ್ಟ 6 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ರಿಂದ ನಿಪಿ-8 ಎಂದು, ದಿಃ06.11.2019 ರ ಲೀಗಲ್ ನೋಟೀಸ್ ನ ದೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, 24

ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-10 ಎಂದು, 14 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 11 ರಿಂದ ನಿಪಿ-24 ಎಂದು, Addressee deceased ಎಂದು ಹಿಂದಿರುಗಿರುವ 3 ಅಂಚೆ ಕವರ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-25 ರಿಂದ ನಿಪಿ-27 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ

ಸಮಯಾವಕಾಶ ಕೋರಿದ್ದರಿಂದ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ಶುಭಾ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.